851 ಶ್ರೀ ಅಶ್ವತ್ಥ್ ಎಂ.ಸಿ. (ಚನ್ನಪಟ್ಟಣ) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪಶುಚಿಕಿತ್ಸಾಲಯಗಳ ಸಂಖ್ಯೆ ಎಷ್ಟು;

ಆ) ಹಲವಾರು ಚಿಕಿತ್ಸಾಲಯಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆಯಿಂದ ರೈತರು ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) 23

ಆ) ಹೌದು

ಇ) ವಿಶೇಷ ನೇಮಕಾತಿ ನಿಯಮ ರಚಿಸಿ, ಆ ಮೂಲಕ ಪಶುವೈದ್ಯಾಧಿಕಾರಿಗಳನ್ನು ನೇರ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಪರಿಗಣನೆಯಲ್ಲಿದೆ. ನೇಮಕಾತಿ ಸಂದರ್ಭದಲ್ಲಿ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಸಂಚಾರಿ ಪಶುಚಿಕಿತ್ಸಾಲಯ, ಚನ್ನಪಟ್ಟಣ ಇಲ್ಲಿ ಖಾಲಿ ಇರುವ ಒಂದು ಪಶುವೈದ್ಯಾಧಿಕಾರಿಗಳ ಹುದ್ದೆಯನ್ನು ಆದ್ಯತೆ ಮೇರೆಗೆ ತುಂಬಲು ಕ್ರಮ ಕೈಗೊಳ್ಳಲಾಗುವುದು.

ಪಶುವೈದ್ಯಕೀಯ ಪರೀಕ್ಷಕರ ಹುದ್ದೆಯಿಂದ ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗೆ ಮುಂಬಡ್ತಿ ನೀಡುವ ಸಂದರ್ಭದಲ್ಲಿ ತಾಲ್ಲೂಕಿನ ವಿವಿಧ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಖಾಲಿ ಇರುವ 4 ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಖಾಲಿ ಇರುವ 642 ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ತುಂಬಲು ಅನುಮತಿ ನೀಡಿದ್ದು, ಕರ್ನಾಟಕ ಲೋಕಸೇವಾ ಆಯೋಗದಿಂದ ಅಭ್ಯರ್ಥಿಗಳು ಆಯ್ಕೆಯಾದ ನಂತರ ನೇಮಕಾತಿ ಸಂದರ್ಭದಲ್ಲಿ ತಾಲ್ಲೂಕಿನ ವಿವಿಧ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಖಾಲಿ ಇರುವ 5 ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಿಂದ ಪ್ರಥಮ ದರ್ಜೆ ಸಹಯಕರ ಹುದ್ದೆಗೆ ಮುಂಬಡ್ತಿ/ಕರ್ನಾಟಕ ಲೋಕಸೇವಾ ಆಯೋಗದಿಂದ ವೇರ ನೇಮಕಾತಿ ಮಾಡುವ ಸಂದರ್ಭದಲ್ಲಿ ಪ್ರಾದೇಶಿಕ ಪ್ರಯೋಗ ಶಾಲೆ, ಬೈರಾಪಟ್ಟಣ ಇಲ್ಲಿ ಖಾಲಿ ಒಂದು ಪ್ರಥಮ ದರ್ಜೆ ಸಹಾಯಕರ ಹುದ್ದೆಯನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಖಾಲಿ ಇರುವ 2174 ಡಿ–ದರ್ಜೆ ನೌಕರರ ಹುದ್ದೆಗಳ ಪೈಕಿ 1400 ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಮತ್ತು ಉಳಿದ ಹುದ್ದೆಗಳನ್ನು ಜಿಲ್ಲಾ ಪಂಚಾಯತ್ ಮುಖಾಂತರ ಬಾಹ್ಯ ಮೂಲಗಳಿಂದ ಹಾಗೂ ಅನುಕಂಪದ ಆಧಾರದಲ್ಲಿ ನೇಮಕವಾದವರ ಮರುಹೊಂದಾಣಿಕೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದ್ದು, ನೇಮಕಾತಿ ಸಂದರ್ಭದಲ್ಲಿ ತಾಲ್ಲೂಕಿನ ವಿವಿಧ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಖಾಲಿಯಿರುವ 11 ಗ್ರೂಪ್–ಡಿ ಹುದ್ದೆಗಳನ್ನು ಆದ್ಯತೆ ಮೇರೆಗೆ ತುಂಬಲು ಪರಿಗಣಿಸಲಾಗುವುದು.

504 ಶ್ರೀ ಕೃಷ್ಣಮೂರ್ತಿ. ಕೆ.ಎಂ. (ಕಡೂರು) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2009–10ನೇ ಸಾಲಿನಲ್ಲಿ ಸರ್ಕಾರ ನೂತನ ಪಶುಆಸ್ಪತ್ರೆಗಳನ್ನು ಆರಂಭಿಸುವ ಕುರಿತು ಚಿಂತನೆ ನಡೆಸಿದೆಯೇ; ನಡೆಸಿದ್ದಲ್ಲಿ ಎಷ್ಟು ಆಸ್ಪತ್ರೆಗಳನ್ನು ಆರಂಭಿಸಲಿದೆ; ಇದಕ್ಕಾಗಿ ಅನುಸರಿಸುವ ಕ್ರಮಗಳ ನಿಯಮಗಳ ಕುರಿತು ಮಾಹಿತಿ ನೀಡುವುದು;

ಆ) ಅಮೃತಮಹಲ್ ಕಾವಲ್ ಅಭಿವೃದ್ಧಿ ಕುರಿತು ಸರ್ಕಾರದಿಂದ ಸ್ಪಷ್ಟವಾದ ಮಾಹಿತಿ ನೀಡುವುದು?

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) ಮೂಲಭೂತ ಸೌಲಭ್ಯ ಸಿಬ್ಬಂದಿ ಹಾಗೂ ಅರ್ಹ ಪದವೀಧರ ಪಶುವೈದ್ಯರ ಕೊರತೆ ಇರುವ ಹಿನ್ನೆಲೆಯಲ್ಲಿ ಇಲಾಖೆಯಲ್ಲಿ ಹೊಸದಾಗಿ ಪಶುವೈದ್ಯಕೀಯ ಸಂಸ್ಥೆಗಳನ್ನು ಪ್ರಾರಂಭಿಸುವ ಪ್ರಕ್ರಿಯೆಯನ್ನು ಸದ್ಯಕ್ಕೆ ಮುಂದೂಡಲಾಗಿದೆ.

ಆ) ಅಮೃತಮಹಲ್ ಕಾವಲ್ ಅಭಿವೃದ್ಧಿ ಪಡಿಸಲು ವಿವಿಧ ಕಾಮಲುಗಳಲ್ಲಿ ನಾಗರಿಕ ಕಾಮಗಾರಿಗಳನ್ನು ತೆಗೆದುಕೊಂಡು ಕಾವಲುಗಳನ್ನು